## 80. ವಿದೇಶಿ ನೇರ ಹೂಡಿಕೆಗೆ ಸರ್ಕಾರ ಉತ್ತೇಜನ

ಆರ್ಥಿಕ ಪ್ರಗತಿಗೆ ವೇಗ ನೀಡುವ ಸಲುವಾಗಿ ಎಲ್ಲ ಕ್ಷೇತ್ರಗಳಲ್ಲೂ ವಿದೇಶಿ ಕಂಪೆನಿಗಳ ನೇರ ಹೂಡಿಕೆಗೆ ರಾಜ್ಯ ಸರ್ಕಾರ ಉತ್ತೇಜನ ನೀಡುತ್ತಿದ್ದು, ಜಪಾನಿನ ಕಂಪೆನಿಗಳಿಂದ ನೇರ ಹೂಡಿಕೆಗೆ ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದು ಮುಖ್ಯಮಂತ್ರಿಯವರು ಭರವಸೆ ನೀಡಿದರು.

ಇಂಡಿಯನ್ ಚೇಂಬರ್ ಆಫ್ ಕಾಮರ್ಸ್ (ಐಸಿಸಿ) ಆಯೋಜಿಸಿದ್ದ 'ಇಂಡೋ–ಜಪಾನಿಸ್ ಬಿಜಿನೆಸ್ ಫೋರಂ' ಸಭೆಯಲ್ಲಿ ಗೃಹ ಕಚೇರಿ 'ಕೃಷ್ಣಾ'ದಿಂದ ವರ್ಚುವಲ್ ಸಂವಾದದಲ್ಲಿ ಪಾಲ್ಗೊಂಡು ಮಾತನಾಡಿದ್ದ ಅವರು, ಕರ್ನಾಟಕ ಮತ್ತು ಜಪಾನ್ ನಡುವಿನ ಔದ್ಯಮಿಕ ಸಂಬಂಧ ಉತ್ತಮವಾಗಿದೆ. ವಿಶೇಷವಾಗಿ ತುಮಕೂರಿನ ವಸಂತ ನರಸಾಪುರದಲ್ಲಿ ಜಪಾನೀಸ್ ಕೈಗಾರಿಕಾ ಟೌನ್‌ಶಿಪ್ ಸ್ಥಾಪಿಸಲಾಗಿದೆ. ಜೊತೆಗೆ ಜಪಾನಿ ಕಂಪೆನಿಗಳ ಸಹಯೋಗದಲ್ಲಿ ಅನೇಕ ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಜಪಾನೀಸ್ ಕೈಗಾರಿಕಾ ಟೌನ್‌ಶಿಪ್‌ಗೆ 519 ಎಕರೆ ಭೂಮಿ ಕಾಯ್ದಿರಿಸಲಾಗಿದ್ದು, ರಸ್ತೆ, ವಿದ್ಯುತ್ ಮತ್ತು ನೀರು ಪೂರೈಕೆ ಸೇರಿದಂತೆ ಇತರೆ ಮೂಲ ಸೌಕರ್ಯ ಕಲ್ಪಿಸಲಾಗಿದೆ. ಈ ಟೌನ್‌ಶಿಪ್‌ನಲ್ಲಿ ಹೆವಿ ಎಂಜಿನಿಯರಿಂಗ್, ಯಂತ್ರೋಪಕರಣ, ಆಟೋಮೋಟೀವ್ ಮತ್ತು ಏರೋಸ್ಪೇಸ್ ಘಟಕಗಳಿಗೆ ಒತ್ತು ನೀಡಲಾಗಿದೆ ಎಂದು ಹೇಳಿದರು.

ದೇಶದ ಹೂಡಿಕೆದಾರರು ಕರ್ನಾಟಕಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದಾರೆ. ಇತ್ತೀಚೆಗೆ ವಿದೇಶಿ ಉದ್ಯಮಿಗಳು ರಾಜ್ಯದತ್ತ ಒಲವು ತೋರುತ್ತಿದ್ದಾರೆ. ಕಳೆದ 2019–20ನೇ ಸಾಲಿನ ಆರ್ಥಿಕ ವರ್ಷದಲ್ಲಿ ವಿದೇಶಿ ನೇರ ಬಂಡವಾಳ ಹೂಡಿಕೆಯಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದೆ. ರಾಜ್ಯವು ಸ್ಟಾರ್ಟ್‌ಅಪ್‌ಗಳ ನೆಲೆಯಾಗಿದ್ದು, ಪ್ರತಿಭಾನ್ವಿತ ಉದ್ಯಮಿಗಳಿಗೆ ಪೂರಕ ವ್ಯವಸ್ಥೆ ಅಭಿವೃದ್ಧಿಪಡಿಸುವಲ್ಲಿ ಅತ್ಯುತ್ತಮ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಉದ್ಯಮಸ್ನೇಹಿ ಆಡಳಿತದ ಜೊತೆಗೆ ಕೈಗಾರಿಕೆಗಳಿಗೆ ಪೂರಕವಾದ ನೀತಿ ರೂಪಿಸುವ ಮೂಲಕ ಉತ್ತಮ ವ್ಯವಸ್ಥೆ ರೂಪಿಸಿದೆ ಎಂದರು.

**ಕೈಗಾರಿಕಾ ಸ್ನೇಹಿ ನೀತಿ:** ಹೂಡಿಕೆದಾರರ ಹಿತವನ್ನೇ ಆಧಾರವಾಗಿಟ್ಟುಕೊಂಡು 'ಹೊಸ ಕೈಗಾರಿಕಾ ನೀತಿ 2020–25' ಪರಿಚಯಿಸಲಾಗಿದ್ದು, ದೊಡ್ಡ ಪ್ರಮಾಣದಲ್ಲಿ ಉದ್ಯೋಗಾವಕಾಶ ಸೃಷ್ಟಿಗೆ ನೆರವಾಗಲಿದೆ. ಉದ್ದಿಮೆಗೆ ಪೂರಕವಾಗಿ ಭೂಮಿ ಲಭ್ಯತೆ, ಕಾರ್ಮಿಕ ಕಾನೂನಿನ ಸುಧಾರಣೆ ಸೇರಿದಂತೆ ಹಲವು ಸುಧಾರಣೆಗಳನ್ನು ಕೈಗಾರಿಕಾ ನೀತಿಯಡಿ ತರಲಾಗುತ್ತಿದೆ. ಕೈಗಾರಿಕಾ ಸೌಲಭ್ಯ ಕಾಯ್ದೆಗೆ (2002) ತಿದ್ದುಪಡಿ ತಂದು ಕೈಗಾರಿಕೆ ಸ್ಥಾಪನೆಗಾಗಿ ಉದ್ಯಮಿಗಳು ನಾನಾ ಇಲಾಖೆಗಳಿಗೆ ಅಲೆದಾಡುವುದನ್ನು ತಪ್ಪಿಸಲಾಗಿದೆ. ಜಿಲ್ಲಾ ಸಮಿತಿ, ರಾಜ್ಯ ಸಮಿತಿಗಳಿಂದ ಕೈಗಾರಿಕಾ ಸ್ಥಾಪನೆಗೆ ಅನುಮತಿ ದೊರೆತ ಕೂಡಲೇ ಕಾಮಗಾರಿ ಆರಂಭಿಸಿ 3 ವರ್ಷದಲ್ಲಿ ಇತರೆ ಅನುಮತಿ ಪಡೆಯಲು ಅವಕಾಶ ಕಲ್ಪಿಸಿ ತಿದ್ದುಪಡಿ ತರಲಾಗಿದೆ ಎಂದು ಹೇಳಿದರು.

ಯಡಿಯೂರಪ್ಪ ಅವರು ಐಟಿ–ಐಟಿಇಎಸ್, ಯಂತ್ರೋಪಕರಣಗಳು, ವಾಹನಗಳು, ಏರೋಸ್ಪೇಸ್ ಸೇರಿದಂತೆ ರಾಜ್ಯದಲ್ಲಿ ಪ್ರಾಥಮಿಕ ಮತ್ತು ತೃತೀಯ ವಲಯದ ಉದ್ದಿಮೆ ಕ್ಷೇತ್ರದಲ್ಲಿನ ಅವಕಾಶಗಳ ಬಗ್ಗೆ ವಿವರಿಸಿದರು.

ಜಪಾನ್‌ನ ಕಂಪೆನಿಗಳಿಂದ ನೇರ ಹೂಡಿಕೆಗೆ ಎಲ್ಲ ರೀತಿಯ ಸಹಕಾರ ಒದಗಿಸುವುದಾಗಿ ಭರವಸೆ ನೀಡುವ ಜೊತೆಗೆ ಹೂಡಿಕೆಗೆ ಕರ್ನಾಟಕ ಸೂಕ್ತ ಸ್ಥಳವಾಗಿರುವುದು ಹಾಗೂ ಅದಕ್ಕೆ ಪೂರಕವಾಗಿ ಸರ್ಕಾರ ಕೈಗೊಂಡಿರುವ ಕಾರ್ಯಗಳ ಬಗ್ಗೆಯೂ ವಿವರ ನೀಡಿದರು.

ಕೈಗಾರಿಕೆ ಇಲಾಖೆ ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತಾ, ರಾಜ್ಯದ ಆರ್ಥಿಕತೆ ಮತ್ತು ಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರ ಪ್ರಮುಖ ಆದ್ಯತೆ ನೀಡಿದೆ. ಏರೋಸ್ಪೇಸ್, ಎಲೆಕ್ಟ್ರಿಕಲ್ ವಾಹನ, ಎಲೆಕ್ಟ್ರಾನಿಕ್ಸ್ ಜವಳಿ, ಕೃಷಿ, ಐಟಿ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರಗಳನ್ನು ಉತ್ತೇಜಿಸಲು ನಿರ್ದಿಷ್ಟ ನೀತಿ ರೂಪಿಸಲಾಗಿದೆ ಎಂದು ಹೇಳಿದರು.

ಜಪಾನ್‌ನಲ್ಲಿರುವ ಭಾರತದ ರಾಯಭಾರಿ ಎಚ್.ಇ.ಸಂಜಯ್ ಕುಮಾರ್ ವರ್ಮಾ, ಜಪಾನ್ ರಾಯಭಾರಿ ಎಚ್.ಡಿ.ಸತೋಶಿ ಸುಜುಕಿ, ಐಸಿಸಿ ಅಧ್ಯಕ್ಷ ಮಾಯಾಂಕ್ ಜಲನ್, ಐಸಿಸಿ ಕಾರ್ಯಕಾರಿ ಸಮಿತಿ ಸದಸ್ಯ ಹೇಮಂತ್ ಕನೋರಿಯಾ, ಜೆಟ್ರೋಹೊದ ಉಪಾಧ್ಯಕ್ಷ ಕಜುಯಾ ನಕಜೊ, ಒಡಿಶಾ ಕೈಗಾರಿಕಾ ಸಚಿವ ದಿಬ್ಯು ಶಂಕರ್ ಮಿಶ್ರಾ, ಒಡಿಶಾ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಹೇಮಂತ್ ಶರ್ಮಾ, ನೀತಿ ಆಯೋಗದ ಸಿಇಓ ಅಮಿತಾಬ್ ಕಾಂತ್, ಐಸಿಸಿಡಬ್ಲ್ಯೂಆರ್ ಸಮಿತಿ ಅಧ್ಯಕ್ಷ ಅಮೇಯ ಪ್ರಭು, ತಮಿಳುನಾಡಿನ ಕೈಗಾರಿಕಾ ಮಾರ್ಗದರ್ಶನ ಮತ್ತು ರಫ್ತು ಪ್ರಚಾರ ಬ್ಯೂರೋ ವ್ಯವಸ್ಥಾಪಕ ನಿರ್ದೇಶಕ ಡಾ: ನೀರಜ್ ಮಿತ್ತಲ್,

ಮಹಾರಾಷ್ಟ್ರ ಕೈಗಾರಿಕಾ ಅಭಿವೃದ್ಧಿ ನಿಗಮದ ಸಿಇಓ ಡಾ:ಪಿ.ಅನ್ಬಳಗನ್, ಜಪಾನ್‌ನ ಪ್ರತಿನಿಧಿಗಳು ವಿಡಿಯೋ ಸಂವಾದದಲ್ಲಿ ಪಾಲ್ಗೊಂಡಿದ್ದರು.

ಆಧಾರ:ವಿಜಯವಾಣಿ, ದಿನಾಂಕ:27.08.2020